## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಜೆಎಂಜೆ ಎಜುಕೇಷನ್ ಸೊಸೈಟಿ ಇವರ ಆಚಾರ್ಯ ಇನ್ಸ್‌ಟಿಟ್ಯೂಟ್ ಆಫ್ ಫಿಜಿಯೋಥೆರಪಿ, ಬೆಂಗಳೂರು ಈ ಸಂಸ್ಥೆಯನ್ನು ಹೊಸದಾಗಿ ಪ್ರಾರಂಭಿಸಲು ಸಂಯೋಜನೆ ನೀಡುವ ಬಗ್ಗೆ.

-----

**ಓದಲಾಗಿದೆ:**

ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ: ACA/AFF/F/PT-97/2019-20, ದಿನಾಂಕ 15.07.2019

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ಕುಲಸಚಿವರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರು ಜೆಎಂಜೆ ಎಜುಕೇಷನ್ ಸೊಸೈಟಿ ಇವರ ಆಚಾರ್ಯ ಇನ್ಸ್‌ಟಿಟ್ಯೂಟ್ ಆಫ್ ಫಿಜಿಯೋಥೆರಪಿ, ಆಚಾರ್ಯ ಡಾ|| ಸರ್ವಪಲ್ಲಿ ರಾಧಾಕೃಷ್ಣನ್ ರಸ್ತೆ, ಸೋಲದೇವನಹಳ್ಳಿ, ಅಚಿತ್ ನಗರ ಪೋಸ್ಟ್, ಬೆಂಗಳೂರು-560 107 ಈ ಸಂಸ್ಥೆಯನ್ನು 2019-20 ನೇ ಸಾಲಿನಿಂದ 40 ಸೀಟುಗಳ ಪ್ರವೇಶಮಿತಿಯುಳ್ಳ ಬಿ.ಪಿ.ಟಿ. ಕೋರ್ಸಿನೊಂದಿಗೆ ಹೊಸದಾಗಿ ಪ್ರಾರಂಭಿಸಲು ಸಂಯೋಜನೆಗಾಗಿ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮ, 1994 ರ ಕಲಂ 45 (2) ರಡಿ ಸಲ್ಲಿಸಿದ್ದ ಅರ್ಜಿಯನ್ನು, ಸ್ಥಳೀಯ ತಪಾಸಣಾ ಸಮಿತಿಯ ವರದಿ, ಅಕಾಡೆಮಿಕ್ ಕೌನ್ಸಿಲ್ ಮತ್ತು ಸಿಂಡಿಕೇಟ್‌ನ ಶಿಫಾರಸುಗಳನ್ನು ಸಲ್ಲಿಸುತ್ತಾ, ಈ ಸಂಸ್ಥೆಯಲ್ಲಿ ಬಿಪಿಟಿ ಕೋರ್ಸ್‌ನ್ನು 40 ಸೀಟುಗಳ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಸಂಯೋಜನೆ ನೀಡಲು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ವಿಷಯವನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ, ಜೆಎಂಜೆ ಎಜುಕೇಷನ್ ಸೊಸೈಟಿ ಇವರ ಆಚಾರ್ಯ ಇನ್ಸ್‌ಟಿಟ್ಯೂಟ್ ಆಫ್ ಫಿಜಿಯೋಥೆರಪಿ, ಆಚಾರ್ಯ ಡಾ|| ಸರ್ವಪಲ್ಲಿ ರಾಧಾಕೃಷ್ಣನ್ ರಸ್ತೆ, ಸೋಲದೇವನಹಳ್ಳಿ, ಅಚಿತ್ ನಗರ ಪೋಸ್ಟ್, ಬೆಂಗಳೂರು-560 107 ಈ ಸಂಸ್ಥೆಯನ್ನು 2019-20 ನೇ ಸಾಲಿನಿಂದ 40 ಸೀಟುಗಳ ಪ್ರವೇಶಮಿತಿಯುಳ್ಳ ಬಿ.ಪಿ.ಟಿ. ಕೋರ್ಸಿನೊಂದಿಗೆ ಹೊಸದಾಗಿ ಪ್ರಾರಂಭಿಸಲು ಸಂಯೋಜನೆಯನ್ನು ನೀಡಲು ಸರ್ಕಾರವು ತೀರ್ಮಾನಿಸಿ, ಈ ಆದೇಶವನ್ನು ಹೊರಡಿಸಿದೆ.

### ಸರ್ಕಾರದ ಆದೇಶ ಸಂಖ್ಯೆ: ಎಂಇಡಿ 255 ಎಂಎಂಸಿ 2019, ಬೆಂಗಳೂರು, ದಿನಾಂಕ: 06.09.2019

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮ, 1994 ರ ಕಲಂ 45 (5) ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಜೆಎಂಜೆ ಎಜುಕೇಷನ್ ಸೊಸೈಟಿ ಇವರ ಆಚಾರ್ಯ ಇನ್ಸ್‌ಟಿಟ್ಯೂಟ್ ಆಫ್ ಫಿಜಿಯೋಥೆರಪಿ, ಆಚಾರ್ಯ ಡಾ|| ಸರ್ವಪಲ್ಲಿ ರಾಧಾಕೃಷ್ಣನ್ ರಸ್ತೆ, ಸೋಲದೇವನಹಳ್ಳಿ, ಅಚಿತ್ ನಗರ ಪೋಸ್ಟ್, ಬೆಂಗಳೂರು-560 107 ಈ ಸಂಸ್ಥೆಯನ್ನು 2019-20 ನೇ ಸಾಲಿನಿಂದ 40 (ನಲವತ್ತು) ಸೀಟುಗಳ ಪ್ರವೇಶಮಿತಿಯುಳ್ಳ ಬಿ.ಪಿ.ಟಿ. ಕೋರ್ಸಿನೊಂದಿಗೆ ಹೊಸದಾಗಿ ಪ್ರಾರಂಭಿಸಲು ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಸಂಯೋಜನೆ ನೀಡಲು ಸರ್ಕಾರವು ಶಿಫಾರಸ್ಸು ಮಾಡಿದೆ.

### ಷರತ್ತು ಮತ್ತು ನಿಬಂಧನೆಗಳು

1. ಈ ಸಂಸ್ಥೆಯು ಬಿ.ಪಿ.ಟಿ. ಕೋರ್ಸಿನ ಶೇ.20 ರಷ್ಟು ಸೀಟುಗಳನ್ನು ಸರ್ಕಾರಕ್ಕೆ ಹಂಚಿಕೆಗಾಗಿ ಬಿಟ್ಟುಕೊಡತಕ್ಕದ್ದು.
2. ಮೇಲ್ಕಂಡ ಕೋರ್ಸಿನ ಸಂಯೋಜನೆಗೆ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಮಂಜೂರಾತಿಯನ್ನು ಪಡೆಯತಕ್ಕದ್ದು.

3. ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ನಿಗದಿಪಡಿಸಿರುವ ಪರಿನಿಯಮಾವಳಿಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯವು ನಿಗದಿಪಡಿಸಿರುವ ಮೂಲಭೂತ ಸೌಲಭ್ಯಗಳನ್ನು ಕಡ್ಡಾಯವಾಗಿ ಹೊಂದತಕ್ಕದ್ದು.
4. ಸದರಿ ಸಂಸ್ಥೆಯು ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅನುಮೋದನೆ ಪಡೆದ ನಂತರವೇ, ನಿಗಧಿಪಡಿಸಿರುವ ವಿದ್ಯಾರ್ಥಿಗಳ ಪ್ರವೇಶ ಪಡೆಯತಕ್ಕದ್ದು. ಯಾವುದೇ ಕಾರಣಕ್ಕೆ ಹೆಚ್ಚುವರಿ ವಿದ್ಯಾರ್ಥಿ ಪ್ರವೇಶ ಪಡೆಯತಕ್ಕದ್ದಲ್ಲ. ಇದನ್ನು ಉಲ್ಲಂಘಿಸಿದ್ದಲ್ಲಿ 1991 ರ ಕರ್ನಾಟಕ ಮಾನ್ಯತೆ ರಹಿತ ಮತ್ತು ಸಂಯೋಜಿತ ಶಿಕ್ಷಣ ಸಂಸ್ಥೆಗಳಿಗೆ ವಿದ್ಯಾರ್ಥಿಗಳ ಪ್ರವೇಶ ನಿಷೇಧ, ಅಧಿನಿಯಮದಡಿ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು.
5. ರಾಜ್ಯ ಸರ್ಕಾರ ಮತ್ತು ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
6. ಸದರಿ ಸಂಸ್ಥೆಯು ಸ್ವಂತ ಆಸ್ಪತ್ರೆಯನ್ನು ಸರ್ಕಾರ ನಿಗಧಿಪಡಿಸಿದ ಕಾಲಮಿತಿಯಲ್ಲಿ ಹೊಂದತಕ್ಕದ್ದು. ತಪ್ಪಿದಲ್ಲಿ ಕಾಲೇಜಿನ ಸಂಯೋಜನೆಯನ್ನು ಹಿಂತೆಗೆದುಕೊಳ್ಳಲಾಗುವುದು.
7. ವಿದ್ಯಾರ್ಥಿಗಳ ಪ್ರವೇಶವನ್ನು 2003 ರ ಕರ್ನಾಟಕ ನರ್ಸಿಂಗ್, ಫಾರ್ಮಸಿ ಮತ್ತು ಫಿಜಿಯೋಥೆರಪಿ ಕೋರ್ಸುಗಳ ಪ್ರವೇಶಕ್ಕೆ ಅಭ್ಯರ್ಥಿಗಳ ಆಯ್ಕೆ ನಿಯಮಾವಳಿ ಹಾಗೂ ಸರ್ಕಾರವು ಕಾಲಕಾಲಕ್ಕೆ ಬಿ.ಪಿ.ಟಿ. ಕೋರ್ಸಿನ ಪ್ರವೇಶಕ್ಕೆ ಸರ್ಕಾರಿ ಕೋಟಾದ ಮತ್ತು ಮ್ಯಾನೇಜ್‌ಮೆಂಟ್ ಕೋಟಾದ ನಿರ್ದಿಷ್ಟ ಅನುಪಾತದಲ್ಲಿ ಪ್ರತಿಬಂಧಿಸುವ ಪ್ರಕಾರವೇ ಮಾಡತಕ್ಕದ್ದು.
8. ಮೇಲ್ಕಂಡ ಸಂಸ್ಥೆಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಸಂಸ್ಥೆಯಾಗಿರುವ ಷರತ್ತಿಗೆ ಒಳಪಟ್ಟಿರುತ್ತದೆ.
9. ಸದರಿ ಸಂಸ್ಥೆಯು ಮೇಲ್ಕಂಡ ಯಾವುದೇ ಷರತ್ತನ್ನು ಉಲ್ಲಂಘಿಸಿದಲ್ಲಿ, 1994 ರ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮದ 48 ನೇ ಪ್ರಕರಣದಲ್ಲಿ ಪ್ರಸ್ತುತ ಸದರಿ ಸಂಸ್ಥೆಗೆ ನೀಡಲಾಗಿರುವ ಸಂಯೋಜನೆಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

K. Murali 06/09/19

(ಕೆ.ಮುರಳಿ)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ವೈದ್ಯಕೀಯ ಶಿಕ್ಷಣ)

**ಇವರಿಗೆ:**
1. ಕುಲಸಚಿವರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಜಯನಗರ, 4 ನೇ ಟಿ ಬ್ಲಾಕ್, ಬೆಂಗಳೂರು -560 041.
2. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು-560009.
3. ಅಧ್ಯಕ್ಷರು / ಪ್ರಾಂಶುಪಾಲರು, ಜೆಎಂಜೆ ಎಜುಕೇಷನ್ ಸೊಸೈಟಿ ಇವರ ಆಚಾರ್ಯ ಇನ್ಸ್ಟಿಟ್ಯೂಟ್ ಆಫ್ ಫಿಜಿಯೋಥೆರಪಿ, ಆಚಾರ್ಯ ಡಾ॥ ಸರ್ವಪಲ್ಲಿ ರಾಧಾಕೃಷ್ಣನ್ ರಸ್ತೆ, ಸೋಲದೇವನಹಳ್ಳಿ, ಅಚಿತ್ ನಗರ ಪೋಸ್ಟ್, ಬೆಂಗಳೂರು-560 107
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**ಪ್ರತಿ:**
1. ಮಾನ್ಯ ಮುಖ್ಯಮಂತ್ರಿಯವರ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ.
3. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವೈದ್ಯಕೀಯ ಶಿಕ್ಷಣ ಇಲಾಖೆ.